ಕಾಯ್ದೆ 1966ರ ಪ್ರಕರಣ 11ಕ್ಕೆ ತಿದ್ದುಪಡಿ ಮಾಡಿ ಅಧ್ಯಾದೇಶವನ್ನು (ordinance) ಹೊರಡಿಸಲಾಗಿತ್ತು. ಸರ್ಕಾರ ಹೊರಡಿಸಿದ ಅಧ್ಯಾದೇಶವನ್ನು ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿ, ಏಕ ಪೀಠ ನ್ಯಾಯಾಧೀಶರು ಸದರಿ ಅಧ್ಯಾದೇಶವನ್ನು ರದ್ದುಗೊಳಿಸಿದ್ದರು. ಈ ಆದೇಶದ ವಿರುದ್ಧ ರಾಜ್ಯ ಸರ್ಕಾರವು ಸಲ್ಲಿಸಿದ ಅಪೀಲ್ ಅರ್ಜಿಯನ್ನು ವಿಭಾಗೀಯ ಪೀಠವು ಎತ್ತಿ ಹಿಡಿದಿರುವುದು.

ಮೊಳಕಾಲ್ಮೂರು ಬಸ್ ನಿಲ್ದಾಣದಿಂದ ತಾಲ್ಲೂಕಿನ ಇತರೇ ಭಾಗಗಳಿಗೆ ರಾಜ್ಯ ರಸ್ತೆ ಸಾರಿಗೆ ಬಸ್ ಸೌಕರ್ಯ

621 - ಶ್ರೀ ಎನ್.ವೈ. ಗೋಪಾಲಕೃಷ್ಣ (ಮೊಳಕಾಲ್ಮೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೊಳಕಾಲ್ಮೂರು ಬಸ್ ನಿಲ್ದಾಣದಿಂದ ಪ್ರತಿದಿನ ಎಷ್ಟು ರಾಜ್ಯ ರಸ್ತೆ ಸಾರಿಗೆ ಬಸ್‌ಗಳು ತಾಲ್ಲೂಕಿನ ಇತರ ಭಾಗಗಳಲ್ಲಿ ಸಂಚರಿಸುತ್ತಿವೆ?*

ಆ) *ಮೇಲ್ಕಂಡ ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೆ ರಾಜ್ಯ ರಸ್ತೆ ಸಾರಿಗೆ ಬಸ್ ಸೌಕರ್ಯವನ್ನು ಒದಗಿಸಲಾಗಿದೆಯೇ?*

ಇ) *ಮೊಳಕಾಲ್ಮೂರಿನಿಂದ ತಾಲ್ಲೂಕಿನ ಎಲ್ಲಾ ಭಾಗಗಳಿಗೆ ಹೆಚ್ಚು ಬಸ್ ಸೌಕರ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು) :

ಅ) 10 ಬಸ್‌ಗಳು.

ಆ) ಇಲ್ಲಾ.

ಇ) ಪ್ರಯತ್ನಿಸಲಾಗುವುದು.

ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರಗಳ ಸ್ಥಾಪನೆ

622 - ಶ್ರೀ ಎನ್. ವೈ. ಗೋಪಾಲಕೃಷ್ಣ (ಮೊಳಕಾಲ್ಮೂರು) : ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಹಾಲಿ ಇರತಕ್ಕ ಅಂಗನವಾಡಿ ಕೇಂದ್ರಗಳೆಷ್ಟು?*

ಆ) *ಈ ತಾಲ್ಲೂಕಿನಲ್ಲಿ ಹೆಚ್ಚುವರಿ ಅಂಗನವಾಡಿ ಕೇಂದ್ರಗಳನ್ನು ತೆರೆಯಲಾಗಿದೆಯೇ?*

ಇ) *ಹಾಗಿದ್ದಲ್ಲಿ ಅದರ ಬಗ್ಗೆ ಪೂರ್ಣ ವಿವರ ನೀಡುವುದು?*

ಈ) *1997-98ರಲ್ಲಿ ಹೊಸದಾಗಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಈ ತಾಲ್ಲೂಕಿನ ಯಾವ ಯಾವ ಜಾಗಗಳಲ್ಲಿ ತೆರೆಯಲಾಗಿದೆ?*